# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.6189/2014/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ||ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 27.1.2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ತುಮಕೂರು ತಾಲ್ಲೂಕಿನ ಮರಳೂರು ಕೆರೆಯಲ್ಲಿ ಅನಧಿಕೃತವಾಗಿ ಹೂಳೆತ್ತುವುದು ಅಥವಾ ಮಣ್ಣನ್ನು ಸಾಗಾಟ ಮಾಡುವುದನ್ನು ತಡೆಯುವ ಬಗ್ಗೆ.

*******

ಶ್ರೀ. ಟಿ.ವಿ.ಎನ್. ಮೂರ್ತಿ, ಕೇಸರ, 1ನೇ ಅಡ್ಡರಸ್ತೆ, ತುಮಕೂರು, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ.ಗುರುನಾಥ್, ಕಾರ್ಯಪಾಲಕ ಅಭಿಯಂತರು, (2) ಶ್ರೀ ಅಂದಾನಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರು, ಮತ್ತು (3) ಶ್ರೀ ಎಸ್.ಆರ್.ಹರೀಶ್, ಕಿರಿಯ ಅಭಿಯಂತರು, ಸಣ್ಣ ನೀರಾವತಿ ಇಲಾಖೆ, ತುಮಕೂರು, (ಇನ್ನು ಮುಂದೆ "ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**2. ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ತುಮಕೂರು ತಾಲ್ಲೂಕಿನ ಮರಳೂರು ಕೆರೆಯಲ್ಲಿ ಕಳೆದ 15 ದಿನಗಳಿಂದ ಅವಿರತವಾಗಿ ಖಾಸಗಿ ವ್ಯಕ್ತಿಗಳು ಮಣ್ಣನ್ನು ಕದ್ದು ಸಾಗಿಸುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಇಲಾಖೆಗೆ ದೂರುನೀಡಿದರೂ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ದಿ. 18.1.2014 ಒಂದು ಹಿಟಾಚಿ, 2 ಜೆ.ಸಿ.ಬಿ, 6 ಟಿಪ್ಪರುಗಳು, 3 ಲಾರಿಗಳು, 1ಟ್ರಾಕ್ಟರ್ ಸಹಾಯದಿಂದ ಅನಧಿಕೃತವಾಗಿ ಮಣ್ಣನ್ನು ಕದ್ದು ಸಾಗಿಸುತ್ತಿರುವುದು ಕಂಡುಬಂದಿರುತ್ತದೆ. ದಿ.29.1.2014ರಂದು ವನ್ಯಜೀವಿ ಜಾಗೃತಿ ನಿಸರ್ಗ ಸಂಸ್ಥೆಯು ಎದುರುದಾರರಿಗೆ ಲಿಖಿತ ದೂರನ್ನು ಸಲ್ಲಿಸಿದರೂ ಯಾವುದೇ ಕ್ರಮ ಜರುಗಿಸಿರುವುದಿಲ್ಲ. ಆದ್ದರಿಂದ ಈ ಅನಧಿಕೃತ ಮಣ್ಣು ಸಾಗಣೆಯನ್ನು ತಡೆಗಟ್ಟಿ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಶ್ರೀ ಎಂ.ವಿ.ಸತ್ಯನಾರಾಯಣ, ರೈಲ್ವೆ ಗುತ್ತಿಗೆದಾರರು ಮರಳೂರು ಕೆರೆಯಿಂದ ತುಮಕೂರು ರೈಲ್ವೆ ನಿಲ್ದಾಣದ ಕಾರ್ಯಕ್ಕೆ ಮಣ್ಣನ್ನು ತೆಗೆದುಕೊಂಡು ಹೋಗಲು ಅನುಮತಿ ಕೋರಿರುತ್ತಾರೆ. ರೈಲ್ವೆ ಪ್ರಯಾಣಿಕರ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗೆ ಕೆರೆಗೆ ಯಾವುದೇ ಹಾನಿಯಾಗದಂತೆ ಮಣ್ಣನ್ನು ತೆಗೆದುಕೊಂಡು ಹೋಗಲು ಅನುಮತಿಯನ್ನು ದೊರಕಿಸಿಕೊಡಲು ಪತ್ರವನ್ನು ಮೇಲಿನ ಕಛೇರಿಗೆ ಬರೆಯಲಾಗಿರುತ್ತದೆ. ಆದರೆ ಮೇಲಾಧಿಕಾರಿಗಳಿಂದ ಯಾವುದೇ ಅನುಮತಿ ನೀಡಿರುವುದಿಲ್ಲ. ಆದರೆ ದಿ.18.1.2014ರಂದು ಮರಳೂರು ಕೆರೆಯಿಂದ ಅನಧಿಕೃತವಾಗಿ ಮಣ್ಣು ಸಾಗಿಸುತ್ತಿರುವುದು ಕಂಡುಬಂದಿದ್ದು, ಈ ಬಗ್ಗೆ ಪೋಲೀಸ್ ಠಾಣೆಗೆ ಲಿಖಿತ ದೂರು ನೀಡಲಾಗಿರುತ್ತದೆ. ಆದ್ದರಿಂದ ಇದರಲ್ಲಿ ಯಾವುದೇ ಕರ್ತವ್ಯ ನಿರ್ಲಕ್ಷತೆ ತೋರಿರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

2 ಮತ್ತು 3ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ತಮ್ಮ ಕಛೇರಿಯ ಅಧಿಕಾರವ್ಯಾಪ್ತಿಗೆ ಒಳಪಟ್ಟು ಸದರಿ ವಿಷಯದ ಬಗ್ಗೆ ಈ ಉಪವಿಭಾಗದ ತಾಂತ್ರಿಕ ಸಿಬ್ಬಂದಿಗಳೊಡನೆ ಕಾಲಕಾಲಕ್ಕೆ ವಿಳಂಬ ಮಾಡದೆ ಕ್ರಮಕ್ಕೈಗೊಳ್ಳಲಾಗುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ತುಮಕೂರು ರೈಲು ನಿಲ್ದಾಣದ ಅಭಿವೃದ್ಧಿ ಕೆಲಸಕ್ಕೆ ಮಣ್ಣು ತೆಗೆದುಕೊಂಡು ಹೋಗಿದ್ದಾಗಿ ಎದುರುದಾರರು ತಿಳಿಸಿರುತ್ತಾರೆ. ಆದರೆ ಗುತ್ತಿಗೆದಾರರು ಪರವಾನಿಗೆ ಇಲ್ಲದೆ ಈ ಮಣ್ಣನ್ನು ತೆಗೆದುಕೊಂಡು ಹೋದ ಕಾರಣ ಕಾನೂನಿನಂತೆ ಕ್ರಿಮಿನಲ್ ಪ್ರಕರಣ ದಾಖಲಿಸಿದ್ದಾಗಿ ತಿಳಿಸಿರುತ್ತಾರೆ.

6. ಯಾವುದೇ ಅಭಿವೃದ್ಧಿ ಕೆಲಸಕ್ಕೆ ಈ ರೀತಿ ಕೆರೆಯ ಪ್ರದೇಶವನ್ನು ಅಗೆದು ಮಣ್ಣನ್ನು ತೆಗೆದುಕೊಂಡು ಹೋಗುವುದರಿಂದ ಪರಿಸರಕ್ಕೆ ಹಾಗೂ ವನ್ಯಜೀವಿಗಳಿಗೆ ಹಾನಿಯುಂಟಾಗುವ

ಸಂಭವವಿರುತ್ತದೆ. ಇಂತಹ ಸಂದರ್ಭದಲ್ಲಿ ಸಂಬಂಧಿಸಿದ ಇಲಾಖೆಯಿಂದ ಅವರು ವಿಧಿಸುವ ಷರತ್ತುಗಳಿಗೊಳಪಟ್ಟು ಮಣ್ಣು ಸಾಗಾಟ ಮಾಡಬೇಕಾಗುತ್ತದೆ. ಈ ಪ್ರಕರಣದಲ್ಲಿ ಗುತ್ತಿಗೆದಾರರು ಪರವಾನಿಗೆ ಇಲ್ಲದೆ ಮಣ್ಣನ್ನು ಸಾಗಾಟ ಮಾಡಿದ್ದರಿಂದ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿದ್ದಾಗಿ ಎದುರುದಾರರು ತಿಳಿಸಿದ್ದಾರೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ತುಮಕೂರು ತಾಲ್ಲೂಕಿನ ಮರಳೂರು ಕೆರೆಯಲ್ಲಿ ಮಣ್ಣು ಸಾಗಾಟ ಮಾಡಲಿಕ್ಕೆ ಅನುಮತಿ ನೀಡಿರುವ ಬಗ್ಗೆ ಯಾವುದೇ ದಾಖಲೆ ಲಭ್ಯವಿರುವುದಿಲ್ಲ. ಅಲ್ಲದೆ ದಿ. 23.5.2011ರಂದು ಜಲಸಂಪನ್ಮೂಲ ಇಲಾಖೆಯ ಸುತ್ತೋಲೆಯ ಪ್ರಕಾರ ಖಾಸಗಿ ವ್ಯಕ್ತಿಗಳು ಅನುಮತಿ ಇಲ್ಲದೆ ಕೆರೆಯಲ್ಲಿಯ ಹೂಳನ್ನು ತೆಗೆಯುವುದು ಕಂಡುಬಂದರೆ ಅವರ ವಿರುದ್ಧ ಸೂಕ್ತ ಕ್ರಮ ಜರುಗಿಸಲು ಆದೇಶ ನೀಡಿರುತ್ತಾರೆ. ಆದ್ದರಿಂದ ಎದುರುದಾರರು ತಮ್ಮ ಕರ್ತವ್ಯವನ್ನು ನಿಭಾಯಿಸಿರುತ್ತಾರೆ.

7. ಆದರೂ ಸಹಾ ಇನ್ನು ಮುಂದೆ ಈ ಕೆರೆಯಲ್ಲಿ ಅನಧಿಕೃತವಾಗಿ ಹೂಳೆತ್ತುವುದು ಅಥವಾ ಮಣ್ಣನ್ನು ಸಾಗಾಟ ಮಾಡುವುದನ್ನು ತಡೆಯಲು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ಕಲಂ.12(1)ರಡಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ನಿರ್ದೇಶಿಸಲಾಗಿದೆ.

8. ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಒಂದು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 27/1/17

**(ನ್ಯಾಯಾಮೂರ್ತಿ ಸುಭಾಷ್ ಬಿ ಆಡಿ)**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**